ಮಂಗಳೂರಿನಲ್ಲಿ ಅಂತರಾಷ್ಟ್ರೀಯ ವಿಮಾನ ನಿಲ್ದಾಣ ನಿರ್ಮಾಣ

1564 - ಶ್ರೀ ಕೆ. ಜಯರಾಮಶೆಟ್ಟಿ (ಉಳ್ಳಾಲ) : ಮಾನ್ಯ ಭಾರಿ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಸಂಪನ್ಮೂಲಗಳ ಅಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮಂಗಳೂರು ಸಮೀಪ ಅಂತರ ರಾಷ್ಟ್ರೀಯ ವಿಮಾನ ನಿಲ್ದಾಣವನ್ನು ನಿರ್ಮಿಸಲು ಸರ್ಕಾರವು ಉದ್ದೇಶಿಸಿದೆಯೇ?

ಆ) ಹಾಗಿದ್ದಲ್ಲಿ ಇದನ್ನು ಎಲ್ಲಿ ನಿರ್ಮಿಸಲಾಗುವುದು? ಇದಕ್ಕಾಗಿ ಎಷ್ಟು ಎಕರೆ ಜಮೀನನ್ನು ವಶಪಡಿಸಲಾಗಿದೆ?

ಇ) ಪ್ರಸ್ತುತ ಮಂಗಳೂರು ಬಜ್ಪೆಯಲ್ಲಿರುವ ವಿಮಾನ ನಿಲ್ದಾಣವನ್ನು ವಿಸ್ತರಿಸಿ ನವೀಕರಿಸಲಾಗುವುದೇ?

ಈ) ಹಾಗಿದ್ದಲ್ಲಿ ಇದನ್ನು ಎಷ್ಟು ವೆಚ್ಚದಲ್ಲಿ ಮತ್ತು ಯಾವಾಗ ಪೂರ್ಣಗೊಳಿಸಲಾಗುವುದು?

ಶ್ರೀ ಆರ್.ವಿ. ದೇಶಪಾಂಡೆ (ಭಾರಿ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಸಂಸನ್ಮೂಲಗಳ ಅಭಿವೃದ್ಧಿ ಸಚಿವರು.) :

ಅ) ಇಲ್ಲ.

ಆ) ಉದ್ಭವಿಸುವುದಿಲ್ಲ.

ಇ) ವಿಸ್ತರಣೆ : ನವೀಕರಣವನ್ನು ಕೈಗೊಳ್ಳಲು ಏರ್‌ಪೋರ್ಟ್ಸ್ ಅಥಾರಿಟಿ ಆಫ್ ಇಂಡಿಯಾದವರು ಉದ್ದೇಶಿಸಿದ್ದಾರೆ.

ಈ) ವಿಸ್ತರಣೆ ಮತ್ತು ನವೀಕರಣಕ್ಕೆ ಬೇಕಾಗುವ 175.00 ಎಕರೆ ಹೆಚ್ಚುವರಿ ಭೂಮಿಯನ್ನು ಸ್ವಾಧೀನಪಡಿಸಿಕೊಳ್ಳಲಾಗಿದೆ. ಕೆಲವು ಭೂ ಮಾಲೀಕರು ಜಾಗವನ್ನು ಖಾಲಿ ಮಾಡದೆ ಇರುವುದರಿಂದ, ಈ ಭೂಮಿಯನ್ನು ಏರ್‌ಪೋರ್ಟ್ಸ್ ಅಥಾರಿಟಿ ಆಫ್ ಇಂಡಿಯಾದವರಿಗೆ ಇನ್ನೂ ವರ್ಗಾವಣೆ ಮಾಡಿರುವುದಿಲ್ಲ. ಭೂಮಿ ವರ್ಗಾವಣೆ ಆದ ಕೂಡಲೇ ಕೆಲವು ಪ್ರಾರಂಭಿಸಲು ಕ್ರಮ ಆದ ಕೂಡಲೇ ಕೆಲಸ ಪ್ರಾರಂಭಿಸಲು ಕ್ರಮ ತೆಗೆದುಕೊಳ್ಳಲಾಗುವುದೆಂದು ಏರ್‌ಪೋರ್ಟ್ಸ್ ಅಥಾರಿಟಿ ಆಫ್ ಇಂಡಿಯಾರವರು ತಿಳಿಸಿದ್ದಾರೆ.

ವಿದ್ಯಾರ್ಥಿಗಳ ವಸತಿಗೃಹದಲ್ಲಿ ಸಿಬ್ಬಂದಿಗಳ ಕೊರತೆ

1566 - ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಕುಂದಾಪುರ) : ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದ ವಿದ್ಯಾರ್ಥಿಗಳ ವಸತಿ ಗೃಹಗಳಲ್ಲಿ ಸಿಬ್ಬಂದಿಗಳ ಕೊರತೆ ಇರುವುದು ನಿಜವೇ? ಇದನ್ನು ಸರಿಪಡಿಸಲು ತೆಗೆದುಕೊಳ್ಳುವ ಕ್ರಮವೇನು?